**ಓ ಎಸ್ ನಂಃ 935/2025**
**ಪಿ ಡಬ್ಲ್ಯೂ ಃ 1**

**ದಿಃ 20.08.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ. ಟಿ ಎಸ್ ಆರ್ ವಕೀಲರಿಂದಃ-**

**ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರಿಕೆ ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಚಾರಗಳು ಸತ್ಯವಾಗಿರುತ್ತದೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಸದರಿ ಪ್ರಮಾಣ ಪತ್ರಿಕೆಯನ್ನು ನನ್ನ ಮುಖ್ಯ ವಿಚಾರಣೆ ಎಂದು ತೆಗೆದುಕೊಳ್ಳಬೇಕು ಎಂದು ಕೋರುತ್ತೇನೆ.**

ದಿಃ 06.03.2024 ರಂದು ಪ್ರತಿವಾದಿಗಳು ನನಗೆ ಬರೆದುಕೊಟ್ಟಿರುವ ಒಂದು ನೋಂದಾಯಿತವಲ್ಲದ ಕ್ರಯದ ಕರಾರು ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ 1 ಎಂದು, ಸಾಕ್ಷಿಯು ನಿಪಿ 1 ರಲ್ಲಿರುವ ದಾಖಲಾತಿಯಲ್ಲಿರುವ ಪ್ರತಿವಾದಿಗಳ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ1(ಎ) ರಿಂದ ನಿಪಿ 1(ಜೆ) ಎಂದು, ದಿಃ 06.10.2025 ರ ತಿಳುವಳಿಕೆ ಪತ್ರದ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 2 ಎಂದು, 2 ಅಂಚೆ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 3 ಮತ್ತು ನಿಪಿ 4 ಎಂದು,2 ಅಂಚೆ ಸ್ವೀಕೃತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 5 ಮತ್ತು ನಿಪಿ 6 ಎಂದು, ಒಂದು ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ ಎಂದು 7 ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆ ಮುಂದುವರೆಸಲು ಕಾಲಾವಕಾಶ ಕೋರಿದ್ದಾರೆ ನೀಡಲಾಗಿದೆ.**

**(ಉಕ್ತ ಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸ ಇ ಎ ಓ**

**ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,**
**ಮಾಗಡಿ.**